Akashvani: Bangalore
National Bulletin In Kannada
16.10.2026: 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
16.10.2026: 13.10hrs
**********

**ಮುಖ್ಯಾಂಶಗಳು:**

1. ಕರ್ನಾಟಕದ ಕಾರವಾರದಲ್ಲಿಂದು ಸ್ವದೇಶಿ ನಿರ್ಮಿತ 'ಐಎನ್‌ಎಸ್ ಸಮರ್ಥಕ್' ನೌಕೆ ಲೋಕಾರ್ಪಣೆಗೊಳಿಸಿದ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್
2. ಕರ್ನಾಟಕದ ನೂತನ ರಾಜ್ಯಪಾಲರಾಗಿ ಡಾ.ಸುಧಾ ಯಾದವ್ ಪ್ರಮಾಣವಚನ ಸ್ವೀಕಾರ
3. ಭಾರತ-ಅಮೆರಿಕ ವ್ಯಾಪಾರ ಒಪ್ಪಂದ ಶೀಘ್ರ ಅಂತಿಮ - ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ವಿಶ್ವಾಸ
4. ಮಹಿಳಾ ಟಿ-೨೦ ಕ್ರಿಕೆಟ್: ಸರಣಿಯ ಮೊದಲ ಪಂದ್ಯದಲ್ಲಿಂದು ಭಾರತ-ಜಿಂಬಾಬ್ವೆ ತಂಡಗಳ ಹಣಾಹಣಿ

***********

ಕರ್ನಾಟಕದ ಕಾರವಾರದ ಐಎನ್‌ಎಸ್ ಕದಂಬ ನೌಕಾ ನೆಲೆಯಲ್ಲಿಂದು ಸ್ವದೇಶಿ ನಿರ್ಮಿತ ಬಹುಪಯೋಗಿ ನೌಕೆ 'ಐಎನ್‌ಎಸ್ ಸಮರ್ಥಕ್' ಭಾರತೀಯ ನೌಕಾಪಡೆಗೆ ಸೇರ್ಪಡೆಯಾಯಿತು. ಈ ಸೇರ್ಪಡೆ ಸಮಾರಂಭಕ್ಕೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅಧಿಕೃತವಾಗಿ ಚಾಲನೆ ನೀಡಿದರು. ಕೇಂದ್ರ ಸರ್ಕಾರದ 'ಮೇಕ್ ಇನ್ ಇಂಡಿಯಾ' ಉಪಕ್ರಮದಡಿ ಎಲ್ & ಟಿ ಸಂಸ್ಥೆ ದೇಶೀಯವಾಗಿ ವಿನ್ಯಾಸಗೊಳಿಸಿ, ನಿರ್ಮಿಸುತ್ತಿರುವ ನಾಲ್ಕು ಬಹು ಉದ್ದೇಶಿತ ನೌಕೆಗಳ ಪೈಕಿ ಇದು ಮೊದಲನೆಯದ್ದಾಗಿದೆ. ಈ ನೌಕೆಯನ್ನು ಮುಖ್ಯವಾಗಿ ಗಸ್ತು ಮತ್ತು ಕರಾವಳಿ ನಿಗಾ ಕಾರ್ಯಗಳಿಗಾಗಿ ವಿನ್ಯಾಸಗೊಳಿಸಲಾಗಿದೆ. ಸುಮಾರು ೧೦೭ ಮೀಟರ್ ಉದ್ದ ಹಾಗೂ ೧೮.೭ ಮೀಟರ್ ಅಗಲ ಇರುವ 'ಐಎನ್‌ಎಸ್ ಸಮರ್ಥಕ್' ನೌಕೆ, ೩ ಸಾವಿರದ ೭೫೦ ಟನ್‌ಗಿಂತ ಹೆಚ್ಚಿನ ಸ್ಥಳಾಂತರ ಸಾಮರ್ಥ್ಯ ಹೊಂದಿದೆ. ಗರಿಷ್ಠ ೧೫ ನಾಟ್ಸ್ ವೇಗದಲ್ಲಿ ಸಂಚರಿಸಬಲ್ಲ ಈ ನೌಕೆ, ಶೇಕಡ ೭೫ಕ್ಕಿಂತ ಹೆಚ್ಚು ಸ್ವದೇಶಿ ಅಂಶಗಳನ್ನು ಒಳಗೊಂಡಿದೆ. ಭವಿಷ್ಯದಲ್ಲಿ ನೌಕಾಪಡೆ ಬಳಸಲಿರುವ ಶಸ್ತ್ರಾಸ್ತ್ರಗಳು, ರೇಡಾರ್‌ಗಳು, ಸಂವೇದಕಗಳು ಮತ್ತು ಇತರ ತಂತ್ರಜ್ಞಾನಗಳನ್ನು ಸಮುದ್ರದಲ್ಲೇ ಪರೀಕ್ಷಿಸಲು ಇದು ಪ್ರಮುಖ ವೇದಿಕೆಯಾಗಲಿದೆ. ಇದೇ ವೇಳೆ ಇಂದು ಸಂಜೆ

ಕೇರಳಂನ ಕೋಝಿಕ್ಕೋಡ್‌ನಲ್ಲಿ ನವರಾತ್ರಿ ಸರಗೋತ್ಸವಂ-೨೦೨೫ ಕಾರ್ಯಕ್ರಮವನ್ನು ಉಪರಾಷ್ಟ್ರಪತಿಯವರು ಉದ್ಘಾಟಿಸಲಿದ್ದಾರೆ.

***********

ಬೆಂಗಳೂರಿನ ಲೋಕಸಭವನದಲ್ಲಿಂದು ನಡೆದ ಸಮಾರಂಭದಲ್ಲಿ ಕರ್ನಾಟಕದ ನೂತನ ರಾಜ್ಯಪಾಲರಾಗಿ ಡಾ.ಸುಧಾ ಯಾದವ್ ಪ್ರಮಾಣವಚನ ಸ್ವೀಕರಿಸಿದರು. ಅವರಿಗೆ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಪ್ರಮಾಣವಚನ ಬೋಧಿಸಿದರು.

****ಧ್ವನಿ**** ಡಾ. ಸುಧಾ ಯಾದವ್

ವಿ.ಎಸ್.ರಮಾದೇವಿ ಅವರ ನಂತರ ಡಾ.ಸುಧಾ ಯಾದವ್ ಅವರು ಕರ್ನಾಟಕದ ಎರಡನೇ ಮಹಿಳಾ ರಾಜ್ಯಪಾಲರಾಗಿದ್ದಾರೆ. ಸಮಾರಂಭದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ನಿಕಟಪೂರ್ವ ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್, ಸಂಪುಟದ ಸಚಿವರು, ಪ್ರತಿಪಕ್ಷಗಳ ನಾಯಕರು ಉಪಸ್ಥಿತರಿದ್ದರು.

***********

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇದೇ ಡಿಸೆಂಬರ್ ೧೧ ಮತ್ತು ೧೨ರಂದು ಕೆನಡಾಕ್ಕೆ ಭೇಟಿ ನೀಡಲಿದ್ದಾರೆ ಎಂದು ಕೆನಡಾದ ಒಟ್ಟಾವಾದಲ್ಲಿರುವ ಭಾರತೀಯ ಹೈಕಮಿಷನ್ ತಿಳಿಸಿದೆ. ಇತ್ತೀಚೆಗೆ ಪ್ರಧಾನಿ ನರೇಂದ್ರ ಮೋದಿ ಮತ್ತು ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ ದೂರವಾಣಿ ಮೂಲಕ ಮಾತುಕತೆ ನಡೆಸಿದ್ದರು. ಈ ವೇಳೆ ಉಭಯ ದೇಶಗಳ ನಡುವಿನ ಸಂಬಂಧಗಳಲ್ಲಿ ಮೂಡಿರುವ ಸಕಾರಾತ್ಮಕ ಬೆಳವಣಿಗೆಯನ್ನು ಮುಂದುವರಿಸಿ, ಕಾರ್ಯತಂತ್ರದ ಪಾಲುದಾರಿಕೆಯ ಪ್ರಮುಖ ಕ್ಷೇತ್ರಗಳಲ್ಲಿ ಸ್ಪಷ್ಟ ಫಲಿತಾಂಶಗಳನ್ನು ಸಾಧಿಸಲು ಇಬ್ಬರೂ ನಾಯಕರು ಒಪ್ಪಿಕೊಂಡರು. ವ್ಯಾಪಾರ, ಇಂಧನ, ತಂತ್ರಜ್ಞಾನ, ಭದ್ರತೆ ಹಾಗೂ ಜನರ ನಡುವಿನ ಸಂಪರ್ಕ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಹಕಾರ ಬಲಪಡಿಸುವ ಕುರಿತು ನಾಯಕರು ಚರ್ಚಿಸಿದ್ದರು.

***********

ಭಾರತ ಮತ್ತು ಅಮೆರಿಕ ನಡುವಿನ ವ್ಯಾಪಾರ ಒಪ್ಪಂದವನ್ನು ಆದಷ್ಟು ಶೀಘ್ರ ಅಂತಿಮಗೊಳಿಸುವ ವಿಶ್ವಾಸವನ್ನು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ವ್ಯಕ್ತಪಡಿಸಿದ್ದಾರೆ. ಈ ಒಪ್ಪಂದವು ಜಾಗತಿಕ ವ್ಯಾಪಾರದ ಹಿತಾಸಕ್ತಿಗೆ ಪೂರಕವಾಗಿದ್ದು, ಉಭಯ ದೇಶಗಳ ಆರ್ಥಿಕ ಸಂಬಂಧಗಳನ್ನು ಬಲಪಡಿಸಲಿದೆ ಎಂದು ಅವರು ಹೇಳಿದ್ದಾರೆ. ಥಾಯ್ಲೆಂಡ್‌ನ ಬ್ಯಾಂಕಾಕ್‌ನಲ್ಲಿ ನಡೆದ ಐಎಂಎಫ್-ವಿಶ್ವಬ್ಯಾಂಕ್ ವಾರ್ಷಿಕ ಸಭೆಗಳ ಸಂದರ್ಭದಲ್ಲಿ ಅಟ್ಲಾಂಟಿಕ್ ಕೌನ್ಸಿಲ್

ಜೊತೆಗಿನ ಸಂವಾದದಲ್ಲಿ ಮಾತನಾಡಿದ ಅವರು, ಭಾರತ-ಅಮೆರಿಕ ಒಪ್ಪಂದದ ಮಾತುಕತೆಗಳು ಮುಂದುವರಿದಿವೆ. ಒಪ್ಪಂದದ ಮೊದಲ ಹಂತ ಅಂತಿಮಗೊಂಡಿದ್ದು, ಕಾನೂನು ಕರಡು ಸಿದ್ಧಪಡಿಸುವ ಪ್ರಕ್ರಿಯೆ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

***********

ಚಂಡೀಗಢದ ಸುಖನಾ ಸರೋವರ ಮತ್ತು ಉತ್ತರ ಪ್ರದೇಶದ ಸೌಜ್ ಝೀಲ್ ಸೇರ್ಪಡೆಯೊಂದಿಗೆ ಭಾರತದಲ್ಲಿನ ರಾಮ್ಸರ್ ತಾಣಗಳ ಸಂಖ್ಯೆ ೧೦೩ಕ್ಕೆ ಏರಿಕೆಯಾಗಿದೆ ಎಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಖಾತೆ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ತಿಳಿಸಿದ್ದಾರೆ. ಈ ಮಹತ್ವದ ಪರಿಸರ ವ್ಯವಸ್ಥೆಗಳ ಸಂರಕ್ಷಣೆಯು ದೇಶದ ನೈಸರ್ಗಿಕ ಪರಂಪರೆಯನ್ನು ರಕ್ಷಿಸುವುದರ ಜೊತೆಗೆ ಮುಂದಿನ ಪೀಳಿಗೆಗೆ ಹಸಿರು ಭವಿಷ್ಯವನ್ನು ಖಚಿತಪಡಿಸುತ್ತದೆ ಎಂದು ಅವರು ಹೇಳಿದ್ದಾರೆ. ೧೯೭೧ರಲ್ಲಿ ಸ್ಥಾಪನೆಯಾದ ರಾಮ್ಸರ್ ಒಪ್ಪಂದದಡಿ ಅಂತಾರಾಷ್ಟ್ರೀಯ ಮಹತ್ವ ಹೊಂದಿರುವ ಜೌಗು ಪ್ರದೇಶಗಳನ್ನು ರಾಮ್ಸರ್ ತಾಣಗಳೆಂದು ಗುರುತಿಸಲಾಗುತ್ತದೆ.

***********

ಕಾಂಗ್ರೆಸ್ ಪಕ್ಷವು ತಪ್ಪು ಮಾಹಿತಿ ಹರಡಿ ಜನರನ್ನು ದಾರಿತಪ್ಪಿಸುತ್ತಿದ್ದು, ಚುನಾವಣಾ ಸೋಲಿಗೆ ಹಿಂಸಾಚಾರ ಮತ್ತು ಅರಾಜಕತೆಯ ಮೂಲಕ ಸೇಡು ತೀರಿಸಿಕೊಳ್ಳಲು ಪ್ರಯತ್ನಿಸುತ್ತಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಆರೋಪಿಸಿದ್ದಾರೆ. ಲಖನೌನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷ ಮತ್ತು ಅದರ ಸಹವರ್ತಿ ಸಂಸ್ಥೆಗಳು ಸರ್ಕಾರವನ್ನು ಉರುಳಿಸಲು ಮತ್ತು ಆಡಳಿತ ಬದಲಾವಣೆಯನ್ನು ಬಯಸುವುದಾಗಿ ಬಹಿರಂಗವಾಗಿ ಹೇಳುತ್ತಿವೆ. ಇದಕ್ಕಾಗಿ ಅವರು ಬಾಂಗ್ಲಾದೇಶದಿಂದ ಸ್ಫೂರ್ತಿ ಪಡೆಯುತ್ತಿದ್ದಾರೆ ಎಂದು ದೂರಿದರು. ಅವರ ಹೋರಾಟವು ಎಸ್ಐಆರ್ ಮತ್ತು ಮುಖ್ಯ ಚುನಾವಣಾ ಆಯುಕ್ತರ ರಾಜೀನಾಮೆಯಂತಹ ವಿಷಯಗಳಿಗಾಗಿ ಅಲ್ಲ ಎಂಬುದನ್ನು ಇದು ಸ್ಪಷ್ಟವಾಗಿ ತೋರಿಸುತ್ತದೆ. ಅವರ ಕಾರ್ಯಗಳ ಕುರಿತು ಸುಪ್ರೀಂ ಕೋರ್ಟ್‌ನ ಹೇಳಿಕೆಗಳು ಇದಕ್ಕೆ ಸೂಚನೆಯಾಗಿದೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಇಂತಹ ರಾಜಕೀಯವನ್ನು ಮಾಡಬಾರದು. ಏಕೆಂದರೆ ದೇಶದ ಭವಿಷ್ಯ ಎಲ್ಲರ ಜವಾಬ್ದಾರಿಯಾಗಿದೆ ಎಂದು ಸಚಿವ ರಾಜನಾಥ್ ಸಿಂಗ್ ಹೇಳಿದರು.

***********

'ಜನ ಸೇವೆಯಿಂದ ದೇಶ ಸೇವೆ' ಎಂಬ ಮಂತ್ರದಡಿ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ, ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ 'ಮೇರಾ ಯುವ ಭಾರತ್- ಮೈ ಭಾರತ್' ಕುರಿತ ಒಂದು ವರದಿ ಇಲ್ಲಿದೆ. ಹದಿನೈದರಿಂದ ಇಪ್ಪತ್ತೊಂಬತ್ತು ವರ್ಷ ವಯಸ್ಸಿನ ಅತಿ ಹೆಚ್ಚು ಜನಸಂಖ್ಯೆಯನ್ನು ಭಾರತ ಹೊಂದಿದೆ. ಈ ಹಿಂದೆ ಪ್ರತ್ಯೇಕ ಯೋಜನೆಗಳು ಮತ್ತು ಸಂಸ್ಥೆಗಳ ಮೂಲಕ ಯುವಜನ ಸಬಲೀಕರಣ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿತ್ತು. ಮುಖ್ಯವಾಗಿ ನೆಹರು ಯುವ ಕೇಂದ್ರ ಸಂಘಟನ್ ಮತ್ತು ರಾಷ್ಟ್ರೀಯ ಸೇವಾ ಯೋಜನೆ, ಪ್ರತಿಯೊಂದೂ ತನ್ನದೇ ಆದ ನೋಂದಣಿ ಮತ್ತು ತನ್ನದೇ ಆದ ಕಾರ್ಯಕ್ರಮಗಳನ್ನು ಹೊಂದಿತ್ತು. 'ಮೇರಾ ಯುವ ಭಾರತ್' ಅನ್ನು ೨೦೨೩ ರ ಅಕ್ಟೋಬರ್‌ನಲ್ಲಿ ಸ್ವಾಯತ್ತ ಸಂಸ್ಥೆಯಾಗಿ ಸ್ಥಾಪಿಸಲಾಯಿತು. ಇದರ ಮೂಲಕ ಒಬ್ಬ ಯುವಕ ಒಮ್ಮೆ ನೋಂದಾಯಿಸಿಕೊಂಡರೆ, ಒಂದೇ ವ್ಯವಸ್ಥೆಯ ಮೂಲಕ ಕೌಶಲ್ಯ ಕಾರ್ಯಕ್ರಮಗಳು, ಸ್ವಯಂಸೇವಾ ಅವಕಾಶಗಳು, ನಾಯಕತ್ವ ತರಬೇತಿ ಮತ್ತು ಸ್ಥಳೀಯ ಅಭಿವೃದ್ಧಿ ಯೋಜನೆಗಳು ಅವರಿಗೆ ತಲುಪಲಿದೆ.ಸುಮಾರು ೨.೫ ಕೋಟಿ ಯುವ ಭಾರತೀಯರು ಈಗಾಗಲೇ ಇದರಲ್ಲಿ ನೋಂದಾಯಿಸಿಕೊಂಡಿದ್ದಾರೆ. ಈ ಮೂಲಕ ಮೇರಾ ಯುವ ಭಾರತ ಅನ್ನು ಯುವ ಭಾಗವಹಿಸುವಿಕೆ, ನಾಯಕತ್ವ ಮತ್ತು ರಾಷ್ಟ್ರಕ್ಕೆ ಸೇವೆ ಸಲ್ಲಿಸುವ ಪ್ರಬಲ ವೇದಿಕೆಯಾಗಿ ಪರಿವರ್ತಿಸಿದ್ದಾರೆ.

***********

ಸೌದಿ ಅರೇಬಿಯಾದಲ್ಲಿನ ಪ್ರಸ್ತುತ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ಏರ್ ಇಂಡಿಯಾ ಸಂಸ್ಥೆಯು, ರಿಯಾದ್, ದಮ್ಮಾಮ್ ಮತ್ತು ಜೆಡ್ಡಾಗೆ ಹಾಗೂ ಅಲ್ಲಿಂದ ಬರುವ ತನ್ನ ವಿಮಾನಯಾನಗಳನ್ನು ಈ ತಿಂಗಳ ೨೦ನೇ ತಾರೀಕಿನವರೆಗೆ ರದ್ದುಗೊಳಿಸಿದೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಮಾಹಿತಿ ನೀಡಿರುವ ಏರ್ ಇಂಡಿಯಾ, ಬೆಳವಣಿಗೆಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿರುವುದಾಗಿಯೂ, ಕಾರ್ಯಾಚರಣೆಗಳನ್ನು ಸುರಕ್ಷಿತವಾಗಿ ಪುನರಾರಂಭಿಸಲು ಪರಿಸ್ಥಿತಿಯನ್ನು ನಿರಂತರವಾಗಿ ಮೌಲ್ಯಮಾಪನ ಮಾಡುತ್ತಿರುವುದಾಗಿ ತಿಳಿಸಿದೆ. ವಿಮಾನಯಾನ ರದ್ದತಿಯಿಂದ ಬಾಧಿತರಾದ ಪ್ರಯಾಣಿಕರಿಗೆ ಟಿಕೆಟ್ ಹಣವನ್ನು ಸಂಪೂರ್ಣವಾಗಿ ಹಿಂತಿರುಗಿಸಲಾಗುವುದು ಎಂದು ಸಂಸ್ಥೆ ಹೇಳಿದೆ.

***********

ರಾಯ್‌ಪುರದ ಶಹೀದ್ ವೀರ್ ನಾರಾಯಣ್ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಮಹಿಳಾ ಕ್ರಿಕೆಟ್ ಸರಣಿಯ ಮೊದಲ ಟಿ-೨೦ ಅಂತಾರಾಷ್ಟ್ರೀಯ ಪಂದ್ಯದಲ್ಲಿ ಭಾರತ, ಜಿಂಬಾಬ್ವೆ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭ ಗಂಟೆಗೆ ಪ್ರಾರಂಭವಾಗಲಿದೆ. ಭಾರತ ವನಿತಾ ತಂಡ, ಸತತ ಐದು ಗೆಲುವುಗಳ ಆತ್ಮವಿಶ್ವಾಸದೊಂದಿಗೆ ಈ ಸರಣಿಯನ್ನು ಪ್ರವೇಶಿಸುತ್ತಿದ್ದರೆ, ಜಿಂಬಾಬ್ವೆ ಕಳೆದ ಐದು ಪಂದ್ಯಗಳಲ್ಲಿ ಸೋಲನ್ನು ಅನುಭವಿಸಿದೆ. ಎರಡನೇ ಮತ್ತು ಮೂರನೇ ಟಿ-೨೦ ಅಂತಾರಾಷ್ಟ್ರೀಯ ಪಂದ್ಯಗಳು ಕ್ರಮವಾಗಿ ಇದೇ ೧೮ ಮತ್ತು ೨೦ ರಂದು ನಡೆಯಲಿದೆ.

***********

ರೈಲು ಪ್ರಯಾಣಿಕರಿಗೆ ಆಹಾರ ಸೇವೆಯ ಗುಣಮಟ್ಟ ಮತ್ತು ಸುರಕ್ಷತೆ ಸುಧಾರಿಸುವ ಉದ್ದೇಶದಿಂದ ಭಾರತೀಯ ರೈಲ್ವೆ ಅಡುಗೆ ಮತ್ತು ಪ್ರವಾಸೋದ್ಯಮ ನಿಗಮ ಹಾಗೂ ಭಾರತೀಯ ಗುಣಮಟ್ಟ ಮಂಡಳಿ ಮಹತ್ವದ ಒಪ್ಪಂದಕ್ಕೆ ಸಹಿ ಹಾಕಿವೆ.

ಈ ಸಹಭಾಗಿತ್ವದಡಿ, ಐಆರ್‌ಸಿಟಿಸಿ ನಿರ್ವಹಣೆಯಲ್ಲಿರುವ ಆಹಾರ ಮಳಿಗೆಗಳಲ್ಲಿ ಆಹಾರದ ಸುರಕ್ಷತೆ ಹಾಗೂ ನೈರ್ಮಲ್ಯವನ್ನು ಖಚಿತಪಡಿಸಲು ಸ್ವತಂತ್ರ ಪರಿಶೀಲನಾ ವ್ಯವಸ್ಥೆ ಜಾರಿಗೆ ಬರಲಿದೆ. ಗುಣಮಟ್ಟ ಮಂಡಳಿಯ ಪ್ರಮಾಣೀಕೃತ ತಜ್ಞರು ಪೂರ್ವಸೂಚನೆ ಇಲ್ಲದೆ ತ್ರೈಮಾಸಿಕ ಹಾಗೂ ಆರು ತಿಂಗಳಿಗೊಮ್ಮೆ ತಪಾಸಣೆ ನಡೆಸಲಿದ್ದಾರೆ. ಈ ವೇಳೆ ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ನಿಯಮಗಳು ಹಾಗೂ ಅಂತಾರಾಷ್ಟ್ರೀಯ ಆಹಾರ ಸುರಕ್ಷತಾ ಮಾನದಂಡಗಳ ಪಾಲನೆಯನ್ನು ಪರಿಶೀಲಿಸಲಾಗುವುದು ಎಂದು ಭಾರತೀಯ ರೈಲ್ವೆ ತಿಳಿಸಿದೆ. ಈ ಕ್ರಮವು ರೈಲುಗಳಲ್ಲಿ ಪ್ರಯಾಣಿಕರಿಗೆ ಸುರಕ್ಷಿತ ಮತ್ತು ಆರೋಗ್ಯಕರ ಆಹಾರ ಒದಗಿಸುವ ಗುರಿ ಹೊಂದಿದೆ.

***********

ಇಂದು ವಿಶ್ವ ಆಹಾರ ದಿನ. ವಿಶ್ವಸಂಸ್ಥೆಯ ಆಹಾರ ಮತ್ತು ಕೃಷಿ ಸಂಸ್ಥೆ ಸ್ಥಾಪನೆಯಾದ ೧೯೪೫ರ ನೆನಪಿಗಾಗಿ ಪ್ರತಿವರ್ಷ ಅಕ್ಟೋಬರ್ ೧೬ರಂದು ವಿಶ್ವ ಆಹಾರ ದಿನ ಆಚರಿಸಲಾಗುತ್ತದೆ. ಈ ವರ್ಷದ ಘೋಷವಾಕ್ಯ 'ಇಂದು ನಾವೀನ್ಯತೆ, ನಾಳೆ ಪೌಷ್ಟಿಕತೆ" ಎಂದಾಗಿದೆ. ಆಹಾರವೇ ಜೀವ, ಅದು ದೈವಸ್ವರೂಪ. ಭಾರತೀಯ ಸಂಸ್ಕೃತಿಯಲ್ಲಿ ಆಹಾರಕ್ಕೆ ದೈವಿಕ ಸ್ಥಾನವಿದ್ದು, ಪ್ರತಿಯೊಂದು

ಆಹಾರದ ಕಾಳು ಅಮೂಲ್ಯ ಮತ್ತು ಜೀವಾಧಾರವಾಗಿದೆ ಎಂದು ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಸಾಮಾಜಿಕ ಜಾಲತಾಣದ ಸಂದೇಶದಲ್ಲಿ ತಿಳಿಸಿದ್ದಾರೆ.

*****END******